ಲೋಕೋಪಯೋಗಿ ವಸತಿ ಗೃಹಗಳು ಶಿಥಿಲಗೊಂಡಿರುವುದು

636(1331); ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆಯ ವಸತಿಗೃಹಗಳು ಸಂಪೂರ್ಣ ಶಿಥಿಲಾವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ವಸತಿಗೃಹಗಳನ್ನು ದುರಸ್ಥಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಪ್ರಸಕ್ತ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯವತಿಯಿಂದ ಹೊಸ ವಸತಿಗೃಹಗಳನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ;

ಈ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿಯೇ ವಸತಿಗೃಹಗಳನ್ನು ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಡಾ॥ ಹೆಚ್.ಸಿ. ಮಹದೇವಪ್ಪ (ಮಾನ್ಯ ಲೋಕೋಪಯೋಗಿ ಸಚಿವರು)

ಅ) ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಕೆಳಕಂಡ ಲೋಕೋಪಯೋಗಿ ಇಲಾಖೆಯ ವಸತಿಗೃಹಗಳು ವಾಸಿಸಲು ಯೋಗ್ಯವಾಗಿರುತ್ತದೆ.

1) ಚನ್ನರಾಯಪಟ್ಟಣ ಟೌನ್–38 ವಸತಿಗೃಹ
2) ಬಾಗೂರು–1 ವಸತಿಗೃಹ
3) ನುಗ್ಗೇಹಳ್ಳಿ–1 ವಸತಿಗೃಹ
4) ಹಿರೀಸಾವೆ–1 ವಸತಿಗೃಹ
5) ಉದಯಪುರ–1 ವಸತಿಗೃಹ
6) ಶ್ರವಣಬೆಳಗೊಳ–1 ವಸತಿಗೃಹ

ಮೇಲಿನ ವಸತಿಗೃಹಗಳ ವಾರ್ಷಿಕ ನಿರ್ವಹಣೆಯನ್ನು ಮಾಡಲಾಗುತ್ತಿದೆ.

ಈ ಕೆಳಕಂಡ ವಸತಿಗೃಹಗಳು ವಾಸಿಸಲು ಯೋಗ್ಯವಾಗಿಲ್ಲದಿದ್ದು, ಶಿಥಿಲಾವಸ್ಥೆಯಲ್ಲಿರುತ್ತದೆ.

1) ಉದಯಪುರ–1 ವಸತಿಗೃಹ

2) ಕಲ್ಕೆರೆ–4 ವಸತಿಗೃಹ

3) ಎಂ. ಶಿವರ–4 ವಸತಿಗೃಹ

4) ದಿಡಗ–4 ವಸತಿಗೃಹ

ಆ) ಸರ್ಕಾರಿ ನೌಕರರು ವಾಸವಾಗಿರಲು ಯೋಗ್ಯವಾಗಿರುವ ವಸತಿಗೃಹಗಳನ್ನು ವಾರ್ಷಿಕ ನಿರ್ವಹಣೆ ಮಾಡಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗಿದೆ. ಶಿಥಿಲಾವಸ್ಥೆಯಲ್ಲಿರುವ ವಸತಿಗೃಹಗಳನ್ನು ದುರಸ್ಥಿಗೊಳಿಸಲಾಗುವುದು.

ಇ) ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಈ) ಪ್ರಶ್ನೆ ಉದ್ಭವಿಸುವುದಿಲ್ಲ.

ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

637(723); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಾದರೆ, ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿಗಳಾಗಿ ಮೇಲ್ದರ್ಜೆಗೇರಿಸಲು ಇರುವ ಮಾನದಂಡವೇನು; ಮಾಗಡಿ ಕ್ಷೇತ್ರ ವ್ಯಾಪ್ತಿಯ ಯಾವ್ಯಾವ ಗ್ರಾಮ ಪಂಚಾಯತಿಗಳನ್ನು ಮೇಲ್ದರ್ಜೆಗೇರಿಸಲಾಗುವುದು?